ಸೆಪ್ಟಂಬರ್ 19	..	..	ಅನಂತಚತುರ್ದಶಿ
ಅಕ್ಟೋಬರ್ 5	..	..	ಮಹಾಲಯ ಅಮಾವಾಸ್ಯೆ
ಸದರೀ 6	..	..	ನವರಾತ್ರೀ ಆರಂಭ ದಿವಸ
ಸದರೀ 11ರಿಂದ 20ರ ವರಿಗೆ ಉಭಯ ದಿವಸಗಳೂ ಸೇರಿ		..	ದಸರಾ ರಜಾ
ನವಂಬರ್ 3	..	..	ದೀಪಾವಳಿ
ಸದರೀ 9	..	..	ಪ್ರಿನ್ಸ್‌ಆಫ್‌ವೇಲ್ಸ್‌ರವರೆ ಜನ್ಮದಿವಸ
ಡಿಸಂಬರ್ 24ರಿಂದ 31ರ ವರಿಗೆ ಉಭಯ ದಿವಸಗಳೂ ಸೇರಿ			ಕ್ರಿಸ್‌ಮಸ್ ರಜಾ

ಈ ವರ್ಷದಲ್ಲಿ ಬರುವ ಸಮಸ್ತ ಭಾನುವಾರಗಳೂ—

ವಿಶೇಷ ವಿಷಯ—ಶ್ರೀಮ್ಮ ಮಹಾರಾಜರವರ ರಾಜ್ಯಾಭಿಷೇಕದ ದಿವಸ, ವಿನಾಯಕ ಚತುರ್ಥೀ ಮತ್ತು ಬಲಿಪಾಡ್ಯಮಿ ಹಬ್ಬಗಳು ಇವು ಭಾನುವಾರದ ದಿವಸ ಬರುವ ಕಾರಣ, ಇಲ್ಲಿ ಸೇರಿಸಿಲ್ಲ.

ಯುಗಾದೀ ಹಬ್ಬ, ಶ್ರೀರಾಮ ನವಮಿ, ಅರ್ಧಾಷ್ಟಮಿ, ಇವುಗಳು ಪ್ರತಿ ವರ್ಷವೂ ಬರುವ ನಿರಾಮದ ರಜಾದಲ್ಲಿ ಸಂಭವಿಸುವ ಕಾರಣ ಇಲ್ಲಿ ಸೇರಿಸಿಲ್ಲ.

ಅಪ್ಪಣೇ ಪ್ರಕಾರ,

ಎಲ್. ಅನಂತಸ್ವಾಮಿರಾವ್,
ರಿಜಿಸ್ಟ್ರಾರ್.

ಇನಾಂ ಇಲಾಖೆ.

ನಂ. 1. ತಾರೀಖು 19ನೇ ನವಂಬರು 1887.

ಇನಾಂದಾರರಿಗೆ ಯಿದರಿಂದ ತಿಳಿಸುವದೇನಂದರೆ, ಲೇಟು ದೊಡ್ಡೇರಿ (ಹಾಲಿಜಳ್ಳಕೆರೆ) ತಾಲ್ಲೂಕಿನಲ್ಲಿ ಯಿರತಕ್ಕ ಜಿಲ್ಲರೆ ಇನಾಂಗಳ ಬಾಬತು 136 ಫೈನಲ್‌ಟೈಟಲ್‌ಡೀಡ್ಡು ಯಾನೆ ಖಾಯಂ ಪಟ್ಟೇಗಳು ಚಿತ್ರದುರ್ಗ ಡಿಸ್ಟ್ರಿಕ್ಟು ಡೆಪ್ಯುಟಿ ಕಮ್ಮಿಷನರವರಿಗೆ ಬಟವಾಡೇ ಬಗ್ಗೆ ಈ ತಾರೀಖಿನಲ್ಲಿ ಕಳುಹಿಸಲ್ಪಟ್ಟವು.

2. ಸದರೀ ತಾಲ್ಲೂಕಿನ ಅಮಲ್‌ದಾರ್ರಿಂದ ಪ್ರತ್ಯೇಕ ಪ್ರತ್ಯೇಕ ನೋಟೀಸ್ ಬಂದ ಮೇಲೆ ಅವುಗಳನ್ನು ತೆಗದುಕೊಳ್ಳುವ ಬಗ್ಗೆ ಸದರೀ ಇನಾಂದಾರರು ಐಜ್ಞ ಪ್ರಕಾರ ಹಾಜರಾಗತಕ್ಕದ್ದು. ಸದರೀ ತಾಲ್ಲೂಕಿನ ಅಮಲ್‌ದಾರ್ರು, ಅಂಥಾ ನೋಟೀಸ್‌ಗಳನ್ನು ದೇರ್‌ಮಾಡದೆ ಕೊಡತಕ್ಕದ್ದೆಂದು ಇದರಿಂದ ನಿಯಮಿಸಲ್ಪಟ್ಟಿರುತ್ತಾರೆ.

3. ಸದರೀ ಮೇಲ್ಕಂಡ ಜಿಲ್ಲರೇ ಯಿನಾಂಗಳ ಬಗ್ಗೆ ಸ್ ೯ 1881ನೇ ಇಸವಿ ಡಿಸಂಬರ್ 6ನೇ ತಾರೀಖಿನ 21ನೇ ನಂಬರು ಇಸ್ತಿಹಾರುನಾವೇ ಪ್ರಕಾರ ಕೊಡಲ್ಪಟ್ಟ ಪಟ್ಟೇಗಳು ರದ್ದು ಮಾಡಲ್ಪಟ್ಟಿರುತ್ತೆಂದು ಇದರ ದೆಸೆಯಿಂದ ಪ್ರಕಟಿಸಲ್ಪಡುತ್ತೆ.

ನಂ. 2. ತಾರೀಖು 23ನೇ ನವಂಬರ್ 1887ನೇ ಇಸವಿ.

ಇನಾಂದಾರರಿಗೆ ಯಿದರಿಂದ ತಿಳಿಸುವದೇನಂದರೆ, ಚಾಮರಾಜನಗರ ಮತ್ತು ಮೊಳಕಾಲ್ ಮುರು ತಾಲ್ಲೂಕುಗಳಲ್ಲಿ ಯಿರತಕ್ಕ ಜಿಲ್ಲರೇ ಇನಾಂಗಳ ಬಾಬತು 144 ಫೈನಲ್‌ಟೈಟಲ್‌ಡೀಡ್ಡು ಯಾನೆ ಖಾಯಂ ಪಟ್ಟೇಗಳು ಮೈಸೂರು ಮತ್ತು ಚಿತ್ರದುರ್ಗ ಡಿಸ್ಟ್ರಿಕ್ಟುಗಳ ಡೆಪ್ಯುಟಿ ಕಮ್ಮಿಷನರವರಿಗೆ ಬಟವಾಡೇ ಬಗ್ಗೆ ಈ ತಾರೀಖಿನಲ್ಲಿ ಕಳುಹಿಸಲ್ಪಟ್ಟವು.

2. ಸದರೀ ತಾಲ್ಲೂಕುಗಳ ಅಮಲ್‌ದಾರ್ರುಗಳಿಂದ ಪ್ರತ್ಯೇಕ ಪ್ರತ್ಯೇಕ ನೋಟೀಸ್ ಬಂದ ಮೇಲೆ ಅವುಗಳನ್ನು ತೆಗದುಕೊಳ್ಳುವ ಬಗ್ಗೆ ಸದರೀ ಯಿನಾಂದಾರರು ಐಜ್ಞ ಪ್ರಕಾರ ಹಾಜರಾಗತಕ್ಕದ್ದು. ಸದರೀ ತಾಲ್ಲೂಕುಗಳ ಅಮಲ್‌ದಾರ್ರುಗಳು ಅಂಥಾ ನೋಟೀಸುಗಳನ್ನು ದೇರ್‌ಮಾಡದೆ ಕೊಡತಕ್ಕದ್ದೆಂದು ಇದರಿಂದ ನಿಯಮಿಸಲ್ಪಟ್ಟಿರುತ್ತಾರೆ.

3. ಸದರೀ ಮೇಲ್ಕಂಡ ಬಿಲ್ಲರೆ ಇನಾಂಗಳ ಬಗ್ಯೆ ಮೊದಲೇ ಈ ಆಫಿಸಿನ 1881ನೇ ಇಸವಿ ಅಕ್ಟೋಬರು 28ನೇ ತಾರೀಖಿನ 17ನೇ ನಂಬರು ಮತ್ತು ಡಿಸಂಬರು 13ನೇ ತಾರೀಖಿನ 22ನೇ ನಂಬರು ಇಸ್ತಿಹಾರ್‌ನಾಮೆಗಳ ಪ್ರಕಾರ ಕೊಡಲ್ಪಟ್ಟ ಟೈಟಿಲ್‌ಡೀಡ್ಡು ಗಳು ರದ್ದುಮಾಡಲ್ಪಟ್ಟಿರುತ್ತೆಂದು ಇದರ ದೆಸೆಯಿಂದ ಪ್ರಕಟಿಸಲ್ಪಡುತ್ತೆ.

ಜೆ. ಪಿ. ಗ್ರಾಂಟ್,
ಸೂಪರ್‌ಟೆಂಡೆಂಟ್ ಆಫ್ ಇನಾಂ ಸೆಟ್ಲ್‌ಮೆಂಟ್.

ಬೆಂಗಳೂರು ಡಿಸ್ಟ್ರಿಕ್ಟು.

ಬೆಂಗಳೂರು ಸಬ್ ಜಡ್ಜಿಯವರ ಕೋರ್ಟಿನಲ್ಲಿ.

ದಿವಾಳಿಯಾದ ಡಿಕ್ರೀ ದೇಣೇದಾರ ಬೆಂಗಳೂರು ತಾ|| ಕೋನಪ್ಪನ ಅಗ್ರಹಾರದಲ್ಲಿ ಇರುವ ಪಿಚ್ಚಗುಂಟ್ಲ ಮುನಿಯಲ್ಲಿಯ ವಿಷಯದಲ್ಲಿ—

ಸ್ಯ 1887ನೇ ಇಸವಿ ದಿವಾಳೀ ಕೇಸ್ ನಂಬರು ಮಿಸಲೇನಿಯಸ್ 766.

ಹುಕ್ಕುಂ.

ಮೇಲ್ಕಂಡ ಮುನಿಯಲ್ಲಿಯು ನಿರ್ಬಂಧದಿಂದ ಖುಲಾಸೆಯಾಗಬೇಕೆಂದು ಕೊಟ್ಟ ಅರ್ಜೀ ಅಂಶವು ಸಬ್ ಜಡ್ಜ್‌ರಾದ ಮೆ|| ಸಿ. ಕೈಸ್ ಸಾಹೇಬರವರ ರೂಬರೂ ಅರ್ಜಿದಾರಳಾದ ಮುನಿಯಲ್ಲಿನಯನ್ನ ಖುದ್ದಾಗಿಯು ಮತ್ತು ಸದರೀಯವಳ ಲೇಣೇದಾರ್‌ರಾದ ವೆಂಕಟಸುಬ್ಬಯ್ಯ ದಲಿಯಾರ್ರಿಗೂ ದರ್ಯಾಫ್ತೀ ಮಾಡಲ್ಪಟ್ಟಿತು.

ಸಿವಿಲ್ ಪ್ರೊಸಿಜ್ಯೂರ್ ಕೋಡಿನ 20ನೇ ಅಧ್ಯಾಯದ ನಿರೂಪಣೆಗಳ ಫಲವನ್ನ ಸದರೀ ಮುನಿಯಲ್ಲಿಯು ಹೊಂದುವದಕ್ಕೆ ಹಕ್ಕು ದಾರಳಾಗುವದರ ಮೂಲಕ ದಿವಾಳಿಯಾದವಳಿಂದು ತೀರ್ಮಾನಿಸಲ್ಪಟ್ಟಿರುತ್ತದೆಯಾಗಿ ಸದರೀ ದಿವಾಳಿಯಾದವಳನ್ನ ನಿರ್ಬಂಧದಿಂದ ವಿಮೋಚನೆ ಮಾಡಿರುವದಲ್ಲದೇ ಇದಕ್ಕೆ ಲಗ್ನತ್ತಾಗಿರುವ ಪಟ್ಟಿಯಲ್ಲಿ ಕಂಡ ಯಾವ ಸಾಲಕ್ಕೂ ಸ್ವರವಾಗಿಯಾಗಲಿ ದಸ್ತಗಿರೀ ಮಾಡಲ್ಪಟ್ಟು ನಿರ್ಬಂಧಪಡುವ ಜವಾಬ್ದಾರಿಯಿಂದ ಸಹ ಅವಳನ್ನ ನಿಖಾಲಸ್ ಮಾಡಲಾಗಿರುತ್ತೆ ಯಂದು ಇದರಿಂದ ಹುಕ್ಕುಂ ಮಾಡಲ್ಪಟ್ಟಿರುತ್ತೆ.

1887ನೇ ಇಸವಿ ನವಂಬರ್ 4ನೇ ತಾರೀಖಿನಲ್ಲಿ ಈ ಕೋರ್ಟು ಮೊಹರ್ ನಮ್ಮ ದಸ್ತಖತ್‌ನೀಲೇ ಕೊಡಲ್ಪಟ್ಟಿತು.

ಸಾಲದಪಟ್ಟಿ.

ನಂಬರ್	ಲೇಣೇದಾರ್ರು ಅಥವಾ ದಾವಾದಾರ್ರ ಹೆಸರು ಮತ್ತು ವಿವರ ಮತ್ತು ಹಾಲೀ ತಿರಿಯಬಂದ ಅವರುಗಳ ವಾಸಸ್ಥಳ.	ಜೊತೆಗೂಡಿ ಯಾವಾಗ ದೆಣೇ ಇಂಪುದದ್ದು	ದೇಣೆಯ ಸ್ವಭಾವ ಮತ್ತು ಅದರ ಪ್ರತಿಫಲ ಮತ್ತು ಗಿರ್ವೀಯೇನಾದರೂ ಇದ್ದರೆ.	ಟಿಪ್ಪಣಿ
1	ಬೆಂಗಳೂರಲ್ಲಿ ಇರುವ ವೆಂಕಟಸುಬ್ಬಯ್ಯಾರು	68 8 0	..	ಡಿಕ್ರೀ ಬಾಬತು.

ದಿವಾಳಿಯಾದ ಡಿಕ್ರೀ ದೇಣೇದಾರ ಚಿಕ್ಕಬಳ್ಳಾಪುರದಲ್ಲಿರುವ ಜಟ್ಟಿ ಶೇತಮ್ಮನ ವಿಷಯದಲ್ಲಿ—

ಸ್ಯ 1887ನೇ ಇಸವಿ ದಿವಾಳೀ ಕೇಸ್ ನಂ. ಮಿ|| 893.

ಹುಕ್ಕುಂ.

ಮೇಲ್ಕಂಡ ಜಟ್ಟಿ ಶೇತಮ್ಮನು ನಿರ್ಬಂಧದಿಂದ ಖುಲಾಸೆಯಾಗಬೇಕೆಂದು ಕೊಟ್ಟ ಅರ್ಜೀ ಅಂಶವು ಸಬ್ ಜಡ್ಜ್‌ರಾದ ಮೆ|| ಸಿ. ಕೈಸ್ ಸಾಹೇಬರವರ ರೂಬರೂ ಅರ್ಜೀದಾರಳಾದ ಶೇತಮ್ಮನ್ನ ಖುದ್ದಾಗಿ ದರ್ಯಾಫ್ತೀ ಮಾಡಲ್ಪಟ್ಟಿತು.